ನಿ.72-(2)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ 72 ರಡಿಯಲ್ಲಿ ಕೇಳಿರುವ ವಿಷಯಕ್ಕೆ ಉತ್ತರ**

ನಿ.72-

ಪ್ರಶ್ನೆ ಸಾರಾಂಶ:

ರಾಜ್ಯದ ವಿವಿಧ ಅಕಾಡೆಮಿಗಳಿಗೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ನೇಮಕಗೊಳಿಸಲಾಗಿದ್ದು, ಕೊಂಕಣಿ, ತುಳು, ನಾಟಕ ಅಕಾಡೆಮಿಗಳಲ್ಲಿ 250 ಮಂದಿ ಸದಸ್ಯರನ್ನು ನೇಮಕಗೊಳಿಸಿದ್ದರೂ, ಓರ್ವ ಕ್ಯಾಥೋಲಿಕ್ ಕ್ರೈಸ್ತ ಸಮುದಾಯದ ಸದಸ್ಯರುಗಳನ್ನು ನೇಮಕ ಮಾಡದೇ ಇರುವುದರ ಬಗ್ಗೆ.

ಉತ್ತರ:

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿವಿಧ ಕಲಾ ಪ್ರಕಾರಗಳ ಪೋಷಣೆ ಹಾಗೂ ಸಂರಕ್ಷಣೆಗಾಗಿ ವಿವಿಧ ಅಕಾಡೆಮಿಗಳು ಹಾಗೂ ಪ್ರಾಧಿಕಾರಗಳನ್ನು ರಚಿಸಿದೆ. ಸದರಿ ಅಕಾಡೆಮಿ ಮತ್ತು ಪ್ರಾಧಿಕಾರಗಳಿಗೆ ಆಯಾ ಕ್ಷೇತ್ರದಲ್ಲಿ ಪರಿಣತಿ ಹೊಂದಿದವರನ್ನು ಅಧ್ಯಕ್ಷರು ಮತ್ತು ಸದಸ್ಯರನ್ನಾಗಿ ನೇಮಿಸಲಾಗುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ:ಕಸಂವಾ 149 ಕಸಧ 2019, ದಿನಾಂಕ:15.10.2019 ರಲ್ಲಿ ಅಧ್ಯಕ್ಷರು/ಸದಸ್ಯರುಗಳನ್ನು ನೇಮಕ ಮಾಡಿ ಆದೇಶ ಹೊರಡಿಸಲಾಗಿದ್ದು, ಸದರಿ ಆದೇಶದಲ್ಲಿ ಕೊಂಕಣಿ, ತುಳು ಮತ್ತು ನಾಟಕ ಅಕಾಡೆಮಿಗಳಿಗೆ ಒಟ್ಟು 38 ಜನ ಸದಸ್ಯರನ್ನು ನೇಮಕ ಮಾಡಲಾಗಿದೆ. ಇದರಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಇಲ್ಲಿಗೆ ಕ್ರೈಸ್ತ ಸಮುದಾಯಕ್ಕೆ ಸೇರಿದ ಶ್ರೀ ಜೋಸೆಫ್ ಅವರನ್ನು ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಕ್ರಸಂಐ 02 ಕೆವಿಸಿ 2020

(ಸಿ.ಟಿ.ರವಿ)

ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.